ಮತ್ತು ಸೇತುವೆಗಳು, ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ, ನಬಾರ್ಡ್ ಯೋಜನೆ, ಹಾಗೂ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಮತ್ತು ಮಲೆನಾಡು ಪ್ರದೇಶ ಅಭಿವೃದ್ಧಿ ಯೋಜನೆಗಳಡಿಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ

495(687) ಶ್ರೀ ಕೃಷ್ಣ ಪಾಲೇಮಾರ್ ಜೆ (ಸುರತ್ಕಲ್) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಸಹಕಾರಿ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು,

ಆ) ಅವುಗಳಲ್ಲಿ ಎಷ್ಟು ಶಾಲಾ ಕಾಲೇಜುಗಳಿಗೆ ಸ್ವಂತ ಕಟ್ಟಡದ ವ್ಯವಸ್ಥೆಯನ್ನು ಒದಗಿಸಿಕೊಡಲಾಗಿದೆ

ಇ) ಕಳೆದ ಎರಡು ವರ್ಷಗಳಲ್ಲಿ ಈ ಉದ್ದೇಶಕ್ಕಾಗಿ ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟು, (ಕ್ಷೇತ್ರವಾರು ವಿವರ ನೀಡುವುದು)

ಈ) ಹೊಸ ಶಾಲಾ ಕಾಲೇಜುಗಳ ಕಟ್ಟಡಗಳ ನಿರ್ಮಾಣದ ಕುರಿತು ಹಾಗೂ ಹಳೇ ಕಟ್ಟಡಗಳ ದುರಸ್ತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 91 ಸರ್ಕಾರಿ ಪ್ರೌಢ ಶಾಲೆಗಳು ಮತ್ತು 41 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿರುತ್ತವೆ (ಒಟ್ಟು 132 ಶಾಲಾ ಕಾಲೇಜುಗಳಿರುತ್ತವೆ)

ಆ) ಎಲ್ಲಾ ಪದವಿ ಪೂರ್ವ ಕಾಲೇಜುಗಳು ಸಂಯುಕ್ತ ಪದವಿ ಪೂರ್ವ ಕಾಲೇಜುಗಳಾಗಿವೆ ಅದರಲ್ಲಿ 112 ಶಾಲಾ ಕಾಲೇಜುಗಳಿಗೆ ಸ್ವಂತ ಕಟ್ಟಡದ ವ್ಯವಸ್ಥೆ ಮಾಡಿ ಕೊಡಲಾಗಿದೆ

ಇ) ಕಳೆದ ಎರಡು ವರ್ಷಗಳಲ್ಲಿ ಈ ಉದ್ದೇಶಕ್ಕಾಗಿ ಸರ್ಕಾರ ಬಿಡುಗಡೆ ಮಾಡಿದ ಹಣದ ವಿವರ ಈ ಕೆಳಕಂಡಂತಿದೆ

(ರೂ ಲಕ್ಷಗಳಲ್ಲಿ)

ಕ್ಷೇತ್ರ	ಪ್ರೌಢಶಾಲೆಗಳು		ಪ ಪೂ ಕಾಲೇಜುಗಳು
	2004–05	2005–06	
ಬಂಟ್ವಾಳ	–	22 70	97 70
ವಿಟ್ಲ	6 50	26 05	29 65
ಮಂಗಳೂರು	–	1 80	9 80
ಸೂರತ್ಕಲ್	1 50	7 40	31 70
ಪುತ್ತೂರು	1 50	11 05	51 15
ಮೂಡಬಿದ್ರೆ	1 50	18 24	8 15
ಬೆಳ್ತಂಗಡಿ	3 00	14 85	79 75
ಸುಳ್ಯ	3 00	5 80	60 80
ಉಳ್ಳಾಲ	1 50	8 95	–
ಒಟ್ಟು	**18 50**	**116 84**	**368 70**

ಈ) 12 ಹೊಸ ಪ್ರೌಢಶಾಲೆಗಳ ಕಟ್ಟಡಗಳ ನಿರ್ಮಾಣಕ್ಕಾಗಿ ಆರ್ ಐ ಡಿ ಎಫ್ –12ರಡಿ ಮತ್ತು ಅಪೆಂಡಿಕ್ಸ್–ಇ ಯಡಿ ಏಳು ಪದವಿ ಪೂರ್ವ ಕಾಲೇಜುಗಳ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಒದಗಿಸಿಕೊಳ್ಳಲಾಗಿದೆ

ಪ್ರೌಢಶಾಲೆಗಳ ದುರಸ್ತಿಗಾಗಿ ರಾಜ್ಯವಲಯ ಯೋಜನೆಯಡಿ ರೂ 12 00 ಲಕ್ಷ ಜಿಲ್ಲಾ ವಲಯ ಯೋಜನೆಯಡಿ ರೂ 10 00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ

496(688) ಶ್ರೀ ಕೃಷ್ಣಪಾಲೇಮಾರ್ ಜೆ (ಸೂರತ್ಕಲ್) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಒಟ್ಟು ಎಷ್ಟು ಶೌಚಾಲಯಗಳನ್ನು ನಿರ್ಮಿಸಿ ಕೊಡಲಾಗಿದೆ, (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)